**All India Radio: Bangalore**
**National Bulletin In Kannada**
**27.04.2026 1.10 p.m.**
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

1. ಪೆಟ್ರೋಲ್, ಡೀಸಲ್ ಮೇಲಿನ ಕೇಂದ್ರ ಅಬಕಾರಿ ಸುಂಕ ಪ್ರತಿ ಲೀಟರ್‌ಗೆ ೧೦ ರೂಪಾಯಿ ಕಡಿತ
2. ದೇಶದಲ್ಲಿ ಲಾಕ್‌ಡೌನ್ ಭೀತಿಯಿಲ್ಲ; ವದಂತಿಗಳನ್ನು ನಂಬದಿರಿ - ನಾಗರಿಕರಿಗೆ ಕೇಂದ್ರ ಸರ್ಕಾರ ಸ್ಪಷ್ಟನೆ
3. ಭಾರತದಿಂದ ಜಾಗತಿಕವಾಗಿ ಶೇಕಡ ೩೦ರಷ್ಟು ಜೆನರಿಕ್ ಔಷಧಗಳ ಪೂರೈಕೆ - ಕೇಂದ್ರ ಸಚಿವೆ ಅನುಪ್ರಿಯಾ ಪಟೇಲ್
4. ಖೇಲೋ ಇಂಡಿಯಾ ಬುಡಕಟ್ಟು ಕ್ರೀಡಾಕೂಟ; ಮಹಿಳಾ ವಿಭಾಗದ ಫುಟ್‌ಬಾಲ್ ಪಂದ್ಯಗಳಲ್ಲಿ ಗುಜರಾತ್ ಹಾಗೂ ಜಾರ್ಖಂಡ್‌ಗೆ ಗೆಲುವು

<><><><>

ದೇಶೀಯ ಬಳಕೆಗಾಗಿ ಪೆಟ್ರೋಲ್ ಮತ್ತು ಡೀಸಲ್ ಮೇಲಿನ ಕೇಂದ್ರ ಅಬಕಾರಿ ಸುಂಕವನ್ನು ಕೇಂದ್ರ ಸರ್ಕಾರ ಪ್ರತಿ ಲೀಟರ್‌ಗೆ ೧೦ ರೂಪಾಯಿಗಳಷ್ಟು ಕಡಿಮೆ ಮಾಡಿದೆ. ಪಶ್ಚಿಮ ಏಷ್ಯಾದ ಬಿಕ್ಕಟ್ಟಿನ ಕಾರಣದಿಂದಾಗಿ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ತಿಳಿಸಿದ್ದಾರೆ. ಈ ಕ್ರಮವು ಗ್ರಾಹಕರಿಗೆ ಬೆಲೆ ಏರಿಕೆಯಿಂದ ರಕ್ಷಣೆ ನೀಡುತ್ತದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಸಚಿವರು ಹೇಳಿದ್ದಾರೆ. ಡೀಸಲ್ ರಫ್ತಿನ ಮೇಲೆ ಲೀಟರ್‌ಗೆ ೨೧.೫ ರೂಪಾಯಿ ಮತ್ತು ವಿಮಾನ ಟರ್ಬೈನ್ ಇಂಧನದ ಮೇಲೆ ಲೀಟರ್‌ಗೆ ೨೯.೫ ರೂಪಾಯಿ ಸುಂಕ ವಿಧಿಸಲಾಗಿದೆ. ಇದು ದೇಶೀಯ ಬಳಕೆಗಾಗಿ ಈ ಉತ್ಪನ್ನಗಳ ಸಮರ್ಪಕ ಲಭ್ಯತೆಯನ್ನು ಖಚಿತಪಡಿಸುತ್ತದೆ ಎಂದು ಅವರು ಮಾಹಿತಿ ನೀಡಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರ ನೇತೃತ್ವದಲ್ಲಿ ಕೇಂದ್ರ ಸರ್ಕಾರ ಪೂರೈಕೆಯಲ್ಲಿನ ಏರಿಳಿತಗಳು ಮತ್ತು ಅಗತ್ಯ ವಸ್ತುಗಳ ವೆಚ್ಚಗಳಿಂದ ನಾಗರಿಕರನ್ನು ರಕ್ಷಿಸುವುದನ್ನು ಸದಾ ಖಚಿತಪಡಿಸಿದೆ ಎಂದು ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಹೇಳಿದ್ದಾರೆ. ಕೇಂದ್ರ ಸರ್ಕಾರದ ಈ ಕ್ರಮವನ್ನು ಅನೇಕ ಸಚಿವರು ಶ್ಲಾಘಿಸಿದ್ದಾರೆ.

<><><><>

ಭಾರತದಲ್ಲಿ ಲಾಕ್‌ಡೌನ್ ಬಗ್ಗೆ ಹಬ್ಬಿರುವ ವದಂತಿಗಳು ಸಂಪೂರ್ಣವಾಗಿ ಸುಳ್ಳು ಮತ್ತು ಅಂತಹ ಯಾವುದೇ ಪ್ರಸ್ತಾಪ ಸರ್ಕಾರದ ಪರಿಶೀಲನೆಯಲ್ಲಿಲ್ಲ ಎಂದು ಪೆಟ್ರೋಲಿಯಂ ಮತ್ತು ನೈಸರ್ಗಿಕ ಅನಿಲ ಸಚಿವ ಹರ್‌ದೀಪ್ ಸಿಂಗ್ ಪುರಿ ಸ್ಪಷ್ಟಪಡಿಸಿದ್ದಾರೆ. ಜಾಗತಿಕ ಪರಿಸ್ಥಿತಿ ಅಸ್ಥಿರವಾಗಿರುವುದರಿಂದ ಸರ್ಕಾರ ಇಂಧನ, ಪೂರೈಕೆ ಸರಪಳಿ ಮತ್ತು ಅಗತ್ಯ ವಸ್ತುಗಳ ವಿಷಯದಲ್ಲಿನ ಬೆಳವಣಿಗೆಗಳನ್ನು ನೈಜ ಸಮಯದಲ್ಲಿ ಸೂಕ್ಷ್ಮವಾಗಿ ಗಮನಿಸುತ್ತಿದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಅವರು ತಿಳಿಸಿದ್ದಾರೆ. ನಾಗರಿಕರಿಗೆ ಇಂಧನ ಮತ್ತು ಇತರ ನಿರ್ಣಾಯಕ ಸರಬರಾಜುಗಳ ನಿರಂತರ ಲಭ್ಯತೆಯನ್ನು ಖಚಿತಪಡಿಸಿಕೊಳ್ಳಲು ಎಲ್ಲಾ ಅಗತ್ಯ ಕ್ರಮಗಳನ್ನು ತೆಗೆದುಕೊಳ್ಳಲಾಗುತ್ತಿದೆ. ಉದಯೋನ್ಮುಖ ಸವಾಲುಗಳನ್ನು ನಿಭಾಯಿಸಲು ಭಾರತ ಸಿದ್ಧವಾಗಿದೆ ಎಂದು ಸಚಿವ ಹರ್‌ದೀಪ್ ಸಿಂಗ್ ಪುರಿ ಪ್ರತಿಪಾದಿಸಿದರು. ಜಾಗತಿಕ ಅನಿಶ್ಚಿತತೆಗಳ ನಡುವೆಯೂ ಭಾರತ ನಿರಂತರವಾಗಿ ಸ್ಥಿತಿಸ್ಥಾಪಕತ್ವವನ್ನು ಪ್ರದರ್ಶಿಸಿದೆ. ಸಮಯೋಚಿತ, ಪೂರ್ವಭಾವಿ ಮತ್ತು ಸಮನ್ವಯದಿಂದ ಕಾರ್ಯ ನಿರ್ವಹಿಸುವುದನ್ನು ಮುಂದುವರಿಸುತ್ತದೆ. ಎಲ್ಲಾ ನಾಗರಿಕರು ಶಾಂತವಾಗಿ, ಜವಾಬ್ದಾರಿಯುತವಾಗಿ ಮತ್ತು ಒಗ್ಗಟ್ಟಿನಿಂದ ಇರುವಂತೆ ಅವರು ಮನವಿ ಮಾಡಿದರು.

<><><><>

ಭಾರತ ಪ್ರಸ್ತುತ ಜಾಗತಿಕವಾಗಿ ಸುಮಾರು ಶೇಕಡ ೩೦ರಷ್ಟು ಜೆನರಿಕ್ ಔಷಧಗಳನ್ನು ಪೂರೈಸುತ್ತಿದೆ. ಇದು ವಿಶ್ವಾದ್ಯಂತ ಕೈಗೆಟಕುವ ಆರೋಗ್ಯ ಸೇವೆಯಲ್ಲಿ ದೇಶದ ಬೆಳೆಯುತ್ತಿರುವ ಪಾತ್ರವನ್ನು ಪ್ರತಿಬಿಂಬಿಸುತ್ತದೆ ಎಂದು

ಕೇಂದ್ರ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಖಾತೆ ರಾಜ್ಯ ಸಚಿವೆ ಅನುಪ್ರಿಯಾ ಪಟೇಲ್ ಹೇಳಿದ್ದಾರೆ. ಲೋಕಸಭೆಯಲ್ಲಿಂದು ಪೂರಕ ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು, ಭಾರತ ಜೆನರಿಕ್ ಔಷಧಗಳ ಅತಿದೊಡ್ಡ ತಯಾರಕಾ ಮತ್ತು ರಫ್ತುದಾರನಾಗಿ ಉಳಿದಿದೆ. ಸರ್ಕಾರ ದೇಶದಲ್ಲಿ ಜೆನರಿಕ್ ಔಷಧಗಳ ಬಳಕೆಯನ್ನು ಹೆಚ್ಚಿಸುವ ನಿಟ್ಟಿನಲ್ಲಿ ಕೆಲಸ ಮಾಡುತ್ತಿದೆ. ಇದರಿಂದಾಗಿ ನಾಗರಿಕರಿಗೆ ಕೈಗೆಟಕುವ ದರದಲ್ಲಿ ಔಷಧಗಳು ಲಭ್ಯವಾಗುತ್ತಿವೆ ಎಂದು ವಿವರಿಸಿದರು. ಭಾರತೀಯ ವೈದ್ಯಕೀಯ ಮಂಡಳಿ ನಿಯಮಗಳು-೨೦೦೦ ಅಡಿಯಲ್ಲಿ ಎಲ್ಲಾ ನೋಂದಾಯಿತ ವೈದ್ಯರು ಜೆನರಿಕ್ ಔಷಧಗಳನ್ನು ಶಿಫಾರಸ್ಸು ಮಾಡುವುದು ಕಡ್ಡಾಯವಾಗಿದೆ ಎಂದು ಅವರು ಸ್ಪಷ್ಟಪಡಿಸಿದರು. ವೈದ್ಯರು ಜೆನರಿಕ್ ಔಷಧಗಳನ್ನು ಶಿಫಾರಸ್ಸು ಮಾಡುವಂತೆ ಸ್ಪಷ್ಟ ನಿಯಮವನ್ನು ಸರ್ಕಾರ ಜಾರಿಗೆ ತಂದಿದೆ. ಸಾರ್ವಜನಿಕ ಆರೋಗ್ಯ ಸೌಲಭ್ಯಗಳು ಲಭ್ಯವಾಗುವ ನಿಟ್ಟಿನಲ್ಲಿ ರಾಜ್ಯ ಸರ್ಕಾರಗಳೊಂದಿಗೆ ಕೆಲಸ ಮಾಡುತ್ತಿದೆ. ಈ ವಿಷಯದ ಬಗ್ಗೆ ರಾಜ್ಯಗಳೊಂದಿಗೆ ಕೇಂದ್ರ ಸರ್ಕಾರ ನಿರಂತರ ಸಂಪರ್ಕದಲ್ಲಿದೆ ಎಂದು ಸಚಿವೆ ಅನುಪ್ರಿಯಾ ಪಟೇಲ್ ತಿಳಿಸಿದ್ದಾರೆ.

<><><><>

ದೇಶದಲ್ಲಿ ಕಳೆದ ದಶಕದಲ್ಲಿ ದೇಶೀಯ ಯೂರಿಯಾ ಉತ್ಪಾದನೆಯು ೨೩೦ ಲಕ್ಷ ಮೆಟ್ರಿಕ್ ಟನ್‌ಗಳಿಂದ ೩೧೫ ಲಕ್ಷ ಮೆಟ್ರಿಕ್ ಟನ್‌ಗಳಿಗೆ ಗಮನಾರ್ಹವಾಗಿ ಹೆಚ್ಚಳವಾಗಿದೆ ಎಂದು ಕೇಂದ್ರ ರಾಸಾಯನಿಕ ಮತ್ತು ರಸಗೊಬ್ಬರ ಸಚಿವ ಜೆ.ಪಿ. ನಡ್ಡಾ ತಿಳಿಸಿದ್ದಾರೆ. ಲೋಕಸಭೆಯಲ್ಲಿಂದು ಪ್ರಶ್ನೆಯೊಂದಕ್ಕೆ ಉತ್ತರಿಸಿದ ಸಚಿವರು, ಯೂರಿಯಾ ಉತ್ಪಾದನೆಯನ್ನು ಹೆಚ್ಚಿಸಲು ೨೦೧೪ರಿಂದ ಗೋರಖ್‌ಪುರ, ಸಿಂಧ್ರಿ, ಬರೌನ್ನಿ, ರಾಮಗುಂಡಂ ಮತ್ತು ಪನಾಗಡ ಸೇರಿದಂತೆ ವಿವಿಧ ಸ್ಥಳಗಳಲ್ಲಿ ಹೊಸ ರಸಗೊಬ್ಬರ ಘಟಕಗಳನ್ನು ಸ್ಥಾಪಿಸಲಾಗಿದೆ ಎಂದು ಹೇಳಿದರು. ಸ್ಥಿರ ಆಮದುಗಳನ್ನು ಖಚಿತಪಡಿಸಿಕೊಳ್ಳಲು ಜೋರ್ಡಾನ್, ಮೊರಾಕೊ, ಸೌದಿ ಅರೆಬಿಯಾ ಮತ್ತು ಒಮನ್ ಸೇರಿದಂತೆ ವಿವಿಧ ದೇಶಗಳೊಂದಿಗೆ ದೀರ್ಘಾವಧಿ ಒಪ್ಪಂದಗಳ ಮೂಲಕ ಭಾರತ ತನ್ನ ರಸಗೊಬ್ಬರ ಪೂರೈಕೆ ಸರಪಳಿಯನ್ನು ಬಲಪಡಿಸುತ್ತಿದೆ ಎಂದು ಸಚಿವರು ವಿವರಿಸಿದರು. ಮುಂಗಾರು ಋತುವಿಗೆ ದೇಶದಲ್ಲಿ ಸಾಕಷ್ಟು ರಸಗೊಬ್ಬರ ದಾಸ್ತಾನಿದೆ. ಈ ಬಗ್ಗೆ ರೈತರು ಚಿಂತಿಸುವ ಅಗತ್ಯವಿಲ್ಲ ಎಂದು ಸಚಿವ ಜೆ.ಪಿ. ನಡ್ಡಾ ಸ್ಪಷ್ಟಪಡಿಸಿದರು.

<><><><>

ಪಶ್ಚಿಮ ಏಷ್ಯಾದ ಸಂಘರ್ಷದ ಕುರಿತು ರಾಜ್ಯಗಳ ಸಿದ್ಧತೆ ಮತ್ತು ಯೋಜನೆಗಳನ್ನು ಪರಿಶೀಲಿಸಲು ಪ್ರಧಾನಿ ನರೇಂದ್ರ ಮೋದಿ, ಇಂದು ಸಂಜೆ ಎಲ್ಲ ರಾಜ್ಯಗಳ ಮುಖ್ಯಮಂತ್ರಿಗಳೊಂದಿಗೆ ವಿಡಿಯೋ ಕಾನ್ಫರೆನ್ಸ್ ಮೂಲಕ ಸಮಾಲೋಚನೆ ನಡೆಸಲಿದ್ದಾರೆ. ಪಶ್ಚಿಮ ಏಷ್ಯಾ ಸಂಘರ್ಷದ ಹಿನ್ನೆಲೆಯಲ್ಲಿ ಪರಿಸ್ಥಿತಿಯನ್ನು ಸಂಘಟನಾತ್ಮಕವಾಗಿ ನಿಭಾಯಿಸಲು ಕೈಗೊಳ್ಳಬೇಕಾದ ಪೂರ್ವ ಸಿದ್ಧತೆಗಳು ಹಾಗೂ ಕಾರ್ಯಯೋಜನೆಗಳ ಬಗ್ಗೆ ಸಭೆಯಲ್ಲಿ ಚರ್ಚೆಯಾಗುವ ನಿರೀಕ್ಷೆಗಳಿವೆ. ಕೇಂದ್ರ ಸರ್ಕಾರ ಈಗಾಗಲೇ ಕೈಗೊಂಡಿರುವ ಉಪಕ್ರಮಗಳು ಹಾಗೂ ರಾಜತಾಂತ್ರಿಕ ಪ್ರಯತ್ನಗಳ ಬಗ್ಗೆ ರಾಜ್ಯಗಳಿಗೆ ಮಾಹಿತಿ ನೀಡುವುದು ಸೇರಿದಂತೆ ಪೆಟ್ರೋಲಿಯಂ ಹಾಗೂ ಅಡುಗೆ ಅನಿಲ ಪೂರೈಕೆ ವ್ಯವಸ್ಥೆಯನ್ನು ನಿಭಾಯಿಸಲು ಪ್ರಧಾನಿ ಅವರು ಮುಖ್ಯಮಂತ್ರಿಗಳಿಗೆ ನಿರ್ದೇಶನ ನೀಡುವ ಸಾಧ್ಯತೆ ಇದೆ.

<><><><>

ಆರ್ಥಿಕ ಸಹಕಾರ ಮತ್ತು ಅಭಿವೃದ್ಧಿ ಸಂಸ್ಥೆಯು ಭಾರತದ ಜಿಡಿಪಿ ಬೆಳವಣಿಗೆ ದರವನ್ನು ೨೦೨೫-೨೬ಕ್ಕೆ ಶೇಕಡಾ ೭.೬, ೨೦೨೬-೨೭ಕ್ಕೆ ಶೇಕಡಾ ೬.೧ ಮತ್ತು ೨೦೨೭-೨೮ಕ್ಕೆ ಶೇಕಡಾ ೬.೪ ಎಂದು ಅಂದಾಜಿಸಿದೆ. ಭಾರತ, ವಿಶ್ವದ ಅತ್ಯಂತ ವೇಗವಾಗಿ ಬೆಳೆಯುತ್ತಿರುವ ಪ್ರಮುಖ ಆರ್ಥಿಕತೆಯಾಗಿ ಉಳಿದಿದೆ. ಪಶ್ಚಿಮ ಏಷ್ಯಾದಲ್ಲಿನ ಬಿಕ್ಕಟ್ಟು ಜಾಗತಿಕ ಆರ್ಥಿಕತೆಯ ಮೇಲೆ ಪರಿಣಾಮ ಬೀರುವ ಸಾಧ್ಯತೆ ಇದೆ. ಹಾರ್ಮುಜ್ ಜಲಸಂಧಿಯ ಮೂಲಕ ಸಾಗಾಣೆ ಸ್ಥಗಿತಗೊಳಿಸಿರುವುದು ಹಾಗೂ ಕೆಲವು ಇಂಧನ ಮೂಲಸೌಕರ್ಯಗಳನ್ನು ಬಂದ್ ಮಾಡಿರುವುದು ಮತ್ತು ಕೆಲವು

ಇಂಧನ ಮೂಲಸೌಕರ್ಯಗಳಿಗೆ ಆಗಿರುವ ಹಾನಿಯು ಇಂಧನ ಬೆಲೆಗಳಲ್ಲಿ ಏರಿಕೆಗೆ ಕಾರಣವಾಗಿದೆ. ಅಲ್ಲದೆ ರಸಗೊಬ್ಬರಗಳಂತಹ ಇತರ ಪ್ರಮುಖ ಸರಕುಗಳ ಜಾಗತಿಕ ಪೂರೈಕೆಯನ್ನು ಅಡ್ಡಿಪಡಿಸಿದೆ ಎಂದು ವರದಿ ತಿಳಿಸಿದೆ. ಜಾಗತಿಕ ಜಿಡಿಪಿ ಬೆಳವಣಿಗೆಯು ೨೦೨೬ರಲ್ಲಿ ಶೇಕಡ ೨.೯ರಷ್ಟು ಸ್ಥಿರವಾಗಿರುತ್ತದೆ ಮತ್ತು ೨೦೨೭ರಲ್ಲಿ ಇದು ಶೇಕಡ ೩ಕ್ಕೆ ತಲುಪಲಿದೆ ಎಂದು ಅಂದಾಜಿಸಲಾಗಿದೆ.

<><><><>

ರಾಷ್ಟ್ರೀಯ ಸ್ವತಂತ್ರ ಪಕ್ಷ-ಆರ್‌ಎಸ್‌ಪಿ ನಾಯಕ ಬಾಲೇಂದ್ರ ಶಾ ಅವರು ಇಂದು ನೇಪಾಳದ ಪ್ರಧಾನಿಯಾಗಿ ಪ್ರಮಾಣವಚನ ಸ್ವೀಕರಿಸಿದ್ದಾರೆ. ಈ ಮೂಲಕ ಅವರು ನೇಪಾಳದ ಅತ್ಯಂತ ಕಿರಿಯ ಚುನಾಯಿತ ಪ್ರಧಾನಿಯಾಗಿದ್ದಾರೆ. ಕಠ್ಮಂಡುವಿನ ಶೀತಲ್ ನಿವಾಸ್‌ನಲ್ಲಿರುವ ಅಧ್ಯಕ್ಷರ ಕಚೇರಿಯಲ್ಲಿ ನಡೆದ ಪ್ರಮಾಣವಚನ ಸ್ವೀಕಾರ ಸಮಾರಂಭದಲ್ಲಿ ನೇಪಾಳ ಅಧ್ಯಕ್ಷರು ಬಾಲೇಂದ್ರ ಶಾ ಅವರಿಗೆ ಪ್ರಮಾಣವಚನ ಬೋಧಿಸಿದರು. ಬಾಲೇಂದ್ರ ಶಾ ಅವರು ನಿನ್ನೆ ಆರ್‌ಎಸ್‌ಪಿ ಸಂಸದೀಯ ಪಕ್ಷದ ನಾಯಕರಾಗಿ ಆಯ್ಕೆಯಾದರು. ಮಾರ್ಚ್ ೫ ರಂದು ನಡೆದ ನೇಪಾಳ ಸಂಸತ್ ಚುನಾವಣೆಯಲ್ಲಿ ಆರ್‌ಎಸ್‌ಪಿ ಭರ್ಜರಿ ಜಯ ಸಾಧಿಸಿತು.

<><><><>

ಛತ್ತೀಸ್‌ಗಢದಲ್ಲಿ ನಡೆಯುತ್ತಿರುವ ಖೇಲೋ ಇಂಡಿಯಾ ಬುಡಕಟ್ಟು ಕ್ರೀಡಾಕೂಟದ ಮೂರನೇ ದಿನವಾದ ಇಂದು ರಾಯ್‌ಪುರದಲ್ಲಿ ಈಜು, ವೇಟ್‌ಲಿಫ್ಟಿಂಗ್, ಕುಸ್ತಿ, ಹಾಕಿ ಮತ್ತು ಫುಟ್‌ಬಾಲ್ ಸ್ಪರ್ಧೆಗಳು ನಡೆಯುತ್ತಿವೆ. ಇಂದು ಬೆಳಗ್ಗೆ ನಡೆದ ಮಹಿಳಾ ವಿಭಾಗದ ಫುಟ್‌ಬಾಲ್ ಪಂದ್ಯಗಳಲ್ಲಿ, ಜಾರ್ಖಂಡ್ ತಂಡವು ಅಸ್ಸಾಂ ತಂಡವನ್ನು ಒಂಬತ್ತು ಗೋಲುಗಳಿಂದ ಪರಾಭವಗೊಳಿಸಿತು. ಮತ್ತೊಂದು ಪಂದ್ಯದಲ್ಲಿ, ಗುಜರಾತ್ ತಂಡ, ಆಂಧ್ರಪ್ರದೇಶದ ವಿರುದ್ಧ ಇಪ್ಪತ್ತೈದು ಗೋಲುಗಳನ್ನು ಗಳಿಸಿ, ಪ್ರಬಲ ಜಯ ಸಾಧಿಸಿತು. ಖೇಲೋ ಇಂಡಿಯಾ ಬುಡಕಟ್ಟು ಕ್ರೀಡಾಕೂಟವು ಇದೇ ೨೫ ರಂದು ಛತ್ತೀಸ್‌ಗಢದಲ್ಲಿ ಪ್ರಾರಂಭವಾಯಿತು ಮತ್ತು ಏಪ್ರಿಲ್ ೩ ರವರೆಗೆ ಮುಂದುವರಿಯುತ್ತದೆ. ಮೂವತ್ತು ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಿಂದ ಮೂರು ಸಾವಿರಕ್ಕೂ ಹೆಚ್ಚು ಕ್ರೀಡಾಪಟುಗಳು ಈ ಕ್ರೀಡಾಕೂಟದಲ್ಲಿ ಭಾಗವಹಿಸಿದ್ದಾರೆ. ಬಿಲ್ಲುಗಾರಿಕೆ, ಅಥ್ಲೆಟಿಕ್ಸ್, ಫುಟ್ಬಾಲ್, ಹಾಕಿ, ಈಜು, ಭಾರ ಎತ್ತುವ ಸ್ಪರ್ಧೆ ಮತ್ತು ಕುಸ್ತಿ ಎಂಬ ಏಳು ವಿಭಾಗಗಳಲ್ಲಿ ಸ್ಪರ್ಧೆಗಳು ನಡೆಯುತ್ತಿದ್ದು, ಮಲ್ಲಕಂಬ ಮತ್ತು ಕಬಡ್ಡಿಯನ್ನು ಪ್ರದರ್ಶನ ಕ್ರೀಡೆಗಳಾಗಿ ಸೇರಿಸಲಾಗಿದೆ. ಈ ಕ್ರೀಡಾಕೂಟಗಳು ರಾಯ್‌ಪುರ, ಬಸ್ತಾರ್ ಮತ್ತು ಸುರ್ಗುಜಾದಲ್ಲಿ ನಡೆಯುತ್ತಿವೆ.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>